# ಪ್ರಧಾನ ನ್ಯಾಯಿಕ ದಂಡಾಧಿಕಾರಿಗಳು, ಗೋಕಾಕ ಇವರ ನ್ಯಾಯಾಲಯ ಸಾಃ ಗೋಕಾಕ

**ಸಾಕ್ಷಿಗೆ ದಿನಾಂಕಃ 02-04-2026 ರಂದು ಪ್ರಮಾಣ ವಚನ ಬೋಧಿಸಲಾಯಿತು**

ಸಿಸಿ ನಂಬರ- 867/2015

ಸಿಡಬ್ಲು10 ಪಿಡಬ್ಲು- 6

| | | |
|---|---|---|
| ಸಾಕ್ಷಿದಾರರ ಹೆಸರು | - | ಭಾಗ್ಯಶ್ರೀ ಅವ್ವಣ್ಣಾ ಕಾಳಣ್ಣವರ |
| ವಯಸ್ಸು | - | 34 ವರ್ಷ |
| ಉದ್ಯೋಗ | - | ಆಶಾ ಕಾರ್ಯಕರ್ತೆ |
| ಸಾಕೀನ | - | ನಾಗನೂರ |

**ಮುಖ್ಯ ವಿಚಾರಣೆ: ಸಹಾಯಕ ಸರ್ಕಾರಿ ಅಭಿಯೋಜಕರಿಂದಃ**

ನನಗೆ ಆರೋಪಿಯ ಪರಿಚಯ ಇಲ್ಲದ ಪ್ರಕರಣದ ಬಗ್ಗೆ ಮಾಹಿತಿ ಇಲ್ಲ ಮತ್ತು ನಾನು ಯಾವುದೇ ಹೇಳಿಕೆಯನ್ನು ನೀಡಿರುವುದಿಲ್ಲ.

(ಈ ಸಂದರ್ಭ ದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಿ ಪಾಟೀ ಸವಾಲು ಮಾಡಲು ಅಭಿಯೋಜಕರು ಕೋರಿದ್ದು ಅನುಮತಿ ನೀಡಲಾಯಿತು)

**ಪಾಟೀ ಸವಾಲು: ಸಹಾಯಕ ಸರ್ಕಾರಿ ಅಭಿಯೋಜಕರಿಂದಃ**

ದಿನಾಂಕ 24-12-2014 ರಂದು ಪೋಲಿಸರ ಮುಂದೆ "ನಾನು ನಮ್ಮೂರಿನಿಂದ ---------------------------------- ಪಿರ್ಯಾದಿ ಕೊಟ್ಟಿದ್ದು ಇರುತ್ತದೆ" ಎಂದು ಹೇಳಿಕೆ ನೀಡಿರುತ್ತೇನೆ ಎಂದರೆ ಸರಿಯಲ್ಲ.

ಮಾನ್ಯ ಸ.ಸ.ಅ. ರವರು ಸಾಕ್ಷಿಗೆ ಸದರಿ ಹೇಳಿಕೆಯನ್ನು ಓದಿ ಹೇಳಿದ್ದು ಸಾಕ್ಷಿಯು ಅದನ್ನು ನಿರಾಕರಿಸಿದ ಮೇರೆಗೆ ಅದನ್ನು ನಿಪಿ–6 ಎಂದು ಗುರುತಿಸಲಾಯಿತು.

2. ಆರೋಪಿಯೊಂದಿಗೆ ಈಗ ನಾನು ರಾಜಿ ಮಾಡಿಕೊಂಡಿರುತ್ತೇನೆಂದರೆ ಸರಿಯಲ್ಲ. ಆ ಕಾರಣಕ್ಕಾಗಿ ಆರೋಪಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆಂದರೆ ಸರಿಯಲ್ಲ.

**ಪಾಟೀ ಸವಾಲುಃ ಆರೋಪಿ ಪರ ವಕೀಲರಿಂದಃ ಇಲ್ಲ.**

**ಮರು ವಿಚಾರಣೆಃ ಇಲ್ಲ**

(ಸಾಕ್ಷಿಯ ಸಾಕ್ಷ್ಯವನ್ನು ತೆರೆದ ನ್ಯಾಯಾಲಯದಲ್ಲಿ ನನ್ನ ಉಖ್ತಲೇಖನದ ಮೇರೆಗೆ ಬೆರಳಚ್ಚು ಮಾಡಲಾಯಿತು)

ಓ. ಹೆ. ಕೇ. ಸರಿ ಇದೆ,

ಪ್ರ.ದಿ.&ನ್ಯಾದಂ., ಗೋಕಾಕ.